# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ 18, ರಾಧಾಕೃಷ್ಣ ದೇವಸ್ಥಾನ.

**ಸಂಖ್ಯೆ: ಸ.ಅ/ವಾ-18/ಪಿ.ಆರ್/03/2021-22** **ದಿನಾಂಕ:-02-09-2021**

### ವಾರ್ಡ್ ಸಮಿತಿ ಸಭೆಯ ನಡವಳಿಗಳು

**ವಿಷಯ:** ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ:ಬಿ12(5)ಪಿ.ಆರ್/35/ 2020-21 ದಿನಾಂಕ: 21-09-2020. ರವರ ಆದೇಶದಂತೆ ದಿನಾಂಕ: 28-08-2021 ರಂದು ವಾರ್ಡ್ ನಂ: 18, ರಾಧಾಕೃಷ್ಣ ದೇವಸ್ಥಾನದ, ವಾರ್ಡ್ ಸಮಿತಿ ಸಭೆಯ ನಡವಳಿಗಳು.

:: ಸಭೆಗೆ ಹಾಜರಾಗಿದ್ದವರ ವಿವರಗಳು ::

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ |
|---|---|---|
| 1. | ಶ್ರೀ.ಎಸ್.ಬಸವರಾಜು. ಭಾ.ಆ.ಸೇ | ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 2. | ಶ್ರೀ. ಈ.ಈರಣ್ಣ. | ಸದಸ್ಯ ಕಾರ್ಯದರ್ಶಿ ವಾಡ್ ನಂ: 18 |
| 3. | ಶ್ರೀ. ನಿರಂಜನಮೂರ್ತಿ | ಸಹಾಯಕ ಕಂದಾಯ ಅಧಿಕಾರಿ (ಹೆಬ್ಬಾಳ) |
| 4. | ಶ್ರೀ.ಅಕ್ಷಯ್ | ಕಿರಿಯ ಆರೋಗ್ಯ ಪರಿವೀಕ್ಷಕರು (ವಾರ್ಡ್ ನಂ.18) |
| 5. | ಶ್ರೀಮತಿ ವಿದ್ಯಾ | ಸಹಾಯಕ ಅಭಿಯಂತರರು ( ಬೆಸ್ಕಾಂ) |
| 6. | ಶ್ರೀ ರಾಜಶೇಖರ್ | ಕಿರಿಯ ಅಭಿಯಂತರರು (ಬೆಸ್ಕಾಂ) |
| 7. | ಶ್ರೀಮತಿ ಸಾಕೀರ್ ಉನ್ನೀಸಾ | ಜಲಮಾಪಕ ಓದುಗಾರರು ಬಿ.ಡಬ್ಲ್ಯೂ.ಎಸ್.ಎಸ್.ಬಿ |
| 8. | ಶ್ರೀಮತಿ ಮಮತ. | ಹಿರಿಯ ಆರೋಗ್ಯ ಪರಿವೀಕ್ಷಕರು (ವಾರ್ಡ್ ನಂ.18) |
| 9. | ಶ್ರೀ. ವಿಜ್ಞಾನಗೌಡ. | ಕ್ಷೇಮಾಭಿವೃದ್ಧಿ ಸಂಘಗಳ ಸಂಯೋಜಕರು |

ಪ್ರಾರಂಭಿಕವಾಗಿ ಸಭೆಯನ್ನು ಉದ್ದೇಶಿಸಿ ಕಾರ್ಯದರ್ಶಿಗಳು ಸಭೆಯಲ್ಲಿ ಹಾಜರಿದ್ದ ವಾರ್ಡ್‌ನಲ್ಲಿರುವ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘದವರನ್ನು ಹಾಗೂ ಅಧಿಕಾರಿಗಳನ್ನು ಸ್ವಾಗತಿಸಿದರು.

ಸಭೆಯ ಅಧ್ಯಕ್ಷರು, ಅಧಿಕಾರಿ ನೌಕರುಗಳು ಮತ್ತು ಕ್ಷೇಮಾಭಿವೃದ್ಧಿ ಸಂಘದ ಸದಸ್ಯರು ಸೇರಿ ಸ್ವ-ಪರಿಚಯ ಮಾಡಿಕೊಳ್ಳಲಾಯಿತು.

ವಾರ್ಡಿನ ಅಧ್ಯಕ್ಷರು ಮಾತನಾಡುತ್ತಾ ವಾರ್ಡಿನಲ್ಲಿ ಅಭಿವೃದ್ಧಿಯಾಗಬೇಕಾಗಿರುವ ಹಾಗೂ ಕುಂದು ಕೊರತೆಗಳ ಬಗ್ಗೆ ಚರ್ಚಿಸಲಾಯಿತು.

1. ಬೀದಿ ಬದಿ ವ್ಯಾಪಾರಿಗಳು ಅಕ್ರಮವಾಗಿ ಸಂಜಯನಗರ ಮುಖ್ಯರಸ್ತೆಯ ಪಾದಾಚಾರಿ ಮಾರ್ಗವನ್ನು ಒತ್ತುವರಿ ಮಾಡಿಕೊಂಡಿರುವುದನ್ನು ತೆರವುಗೊಳಿಸಲು ದಿನನಿತ್ಯ ಸಂಜೆ 5 ಗಂಟೆಯಿಂದ 8 ಗಂಟೆಯವರಗೆ ತೆರವು ಕಾರ್ಯಾಚರಣೆಯನ್ನು ಹಮ್ಮಿಕೊಂಡು ತೆರವುಗೊಳಿಸಲು ಸಭೆಯಲ್ಲಿ ಹಾಜರಿದ್ದ ಸಂಚಾರಿ ಪೋಲೀಸರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿದರು.
2. ಕ್ಯಾಡ್‌ಮೆಟ್ ಬಡಾವಣೆಯಲ್ಲಿ ಆಗುತ್ತಿರುವ ಅನಿಯಮಿತ ಕುಡಿಯುವ ನೀರಿನ ಸರಬರಾಜನ್ನು ಸರಿಪಡಿಸಲು ಸಭೆಯಲ್ಲಿ ಹಾಜರಿದ್ದ ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳಿಗೆ ಮಾನ್ಯ ಅಧ್ಯಕ್ಷರು ಸೂಚಿಸಿದರು.
3. ಕುಡಿಯುವ ನೀರಿಗೆ ಕಲುಷಿತ ನೀರು ಮಿಶ್ರಣವಾಗುವುದನ್ನು ಸರಿಪಡಿಸಲು ಸಭೆಯಲ್ಲಿ ಹಾಜರಿದ್ದ ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳಿಗೆ ಮಾನ್ಯ ಅಧ್ಯಕ್ಷರು ಸೂಚಿಸಿದರು.
4. ಹೆಚ್.ಐ.ಜಿ ಕಾಲೋನಿಯ ಮನೆ ನಂ. 245 ರ ಮುಂಭಾಗದಲ್ಲಿ ಪಾದಾಚಾರಿ ಮಾರ್ಗವನ್ನು ಪೂರ್ಣಗೊಳಿಸಲು ಸಭೆಯಲ್ಲಿ ಹಾಜರಿದ್ದ ಸಭೆಯಲ್ಲಿ ಹಾಜರಿದ್ದ ವಾರ್ಡ್‌ನ ಸಹಾಯಕ ಅಭಿಯಂತರರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿದರು.

Scanned By Scanner Go

5. ವೆಂಕಟಚಾರಿ ನಗರದ ಮೊದಲನೆ ಮುಖ್ಯರಸ್ತೆಯಲ್ಲಿ ಹೊಸದಾಗಿ ಬೀದಿ ದೀಪವನ್ನು ಅಳವಡಿಸಲು ಕಿರಿಯ ಅಭಿಯಂತರರು (ವಿದ್ಯುತ್ ಬಿ.ಬಿ.ಎಂ.ಪಿ) ರವರಿಗೆ ತಿಳಿಸಲು ಸಭೆಯಲ್ಲಿ ಹಾಜರಿದ್ದ ವಾರ್ಡ್‌ನ ಸಹಾಯಕ ಅಭಿಯಂತರರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿದರು.

6. ರೈಲ್ವೇ ಅಂಡರ್ ಪಾಸ್ ಬಳಿ ಹೊಸದಾಗಿ ವಿದ್ಯುತ್ ಕಂಬಗಳನ್ನು ಅಳವಡಿಸಲು ರೈಲ್ವೇ ಇಲಾಖೆಯ ಅನುಮತಿಗಾಗಿ ಸಂಬಂಧಪಟ್ಟ ರೈಲ್ವೆ ಅಧಿಕಾರಿಗಳಿಗೆ ಪತ್ರವನ್ನು ಸಿದ್ದಪಡಿಸಿ ನೋಡಲ್ ಅಧಿಕಾರಿಗಳ ಸಹಿಯೊಂದಿಗೆ ಪತ್ರ ರವಾನಿಸಲು ವಾರ್ಡ್‌ನ ಸಹಾಯಕ ಅಭಿಯಂತರರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿದರು.

7. ಹೆಚ್.ಎ.ಜಿ ಕಾಲೋನಿಯ ಮೊದಲನೇ ಮುಖ್ಯರಸ್ತೆಯಲ್ಲಿ ಶೇಖರಣೆಯಾಗಿರುವ ಪಾದಚಾರಿ ಮಾರ್ಗದ ಡೆಬ್ರೀಸ್ ಅನ್ನು ತೆರವುಗೊಳಿಸಲು ವಾರ್ಡ್‌ನ ಸಹಾಯಕ ಅಭಿಯಂತರರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿದರು.

8. ವಾರ್ಡ್‌ನಲ್ಲಿ ಕಸ ವಿಲೇವಾರಿಯನ್ನು ಸಮರ್ಪಕವಾಗಿ ನಿರ್ವಹಿಸಲು ಸಭೆಯಲ್ಲಿ ಹಾಜರಿದ್ದ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿದರು.

9. ವಾರ್ಡ್‌ನಲ್ಲಿ ಬರುವ ಜಲದರ್ಶಿನಿ ಬಡಾವಣೆ, ಎ.ಇ.ಸಿ.ಎಸ್ ಬಡಾವಣೆ ಹಾಗೂ ಹೆಚ್.ಎ.ಜಿ ಕಾಲೋನಿಯ ಮೊದಲನೆ ಮುಖ್ಯರಸ್ತೆಗಳಲ್ಲಿ 11 ಕೆ.ವಿ ಕೇಬಲ್ ಅಳವಡಿಸಲು ಅಗೆದಿರುವ ಗುಂಡಿಗಳನ್ನು ಯಥಾಸ್ಥಿತಿಗೆ ತಂದು ಶೇಖರಣೆಯಾಗಿರುವ ಡೆಬ್ರೀಸ್ ಅನ್ನು 04-09-2021 ರ ಒಳಗಾಗಿ ತೆರವುಗೊಳಿಸಲು ಸಭೆಯಲ್ಲಿ ಹಾಜರಿದ್ದ ಬೆಸ್ಕಾಂ ಅಭಿಯಂತರರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿದರು.

ಈ ಮೇಲಿನ ಎಲ್ಲಾ ಅಂಶಗಳಿಗೆ ಸಂಬಂಧಪಟ್ಟಂತೆ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು ಸದರಿ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನೆಗಳೊಂದಿಗೆ ಈ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ: 18 ರಾದಾಕೃಷ್ಣ ದೇವಸ್ಥಾನ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ನಂ: 18, ರಾದಾಕೃಷ್ಣ ದೇವಸ್ಥಾನ

Scanned By Scanner Go